# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶಿವಮೊಗ್ಗ ಜಿಲ್ಲಾ ಪಂಚಾಯಿತಿಯ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಲ್ಲಿ ಮೈಸೂರು ಪೇಪರ್ ಮಿಲ್ಸ್, ಭದ್ರಾವತಿ ಇಲ್ಲಿಯ ತಾಂತ್ರಿಕ ಅಧೀಕ್ಷಕರ ಸೇವೆಯನ್ನು ಪಡೆದಿದ್ದು ಸದರಿಯವರ ವೇತನಕ್ಕಾಗಿ ಹೆಚ್ಚುವರಿ ಅನುದಾನವನ್ನು ಕೋರಿರುವ ಬಗ್ಗೆ

**ಓದಲಾಗಿದೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತ ಸಂಖ್ಯೆ:ಗ್ರಾಅಪ/45/ಜಿಪಅ/2021

ಪ್ರಸ್ತಾವನೆ:

ಶಿವಮೊಗ್ಗ ಜಿಲ್ಲಾ ಪಂಚಾಯಿತಿಯ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಲ್ಲಿ ಮೈಸೂರು ಪೇಪರ್ ಮಿಲ್ಸ್, ಭದ್ರಾವತಿ ಇಲ್ಲಿಯ ತಾಂತ್ರಿಕ ಅಧೀಕ್ಷಕರ ಸೇವೆಯನ್ನು ಪಡೆದಿದ್ದು ಸದರಿಯವರಿಗೆ ದಿನಾಂಕ:10.9.2020ರಿಂದ 30.9.2021ರವರೆಗಿನ ವೇತನಕ್ಕಾಗಿ ರೂ.4.12ಲಕ್ಷ ಅನುದಾನವನ್ನು ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2059-00-101-0-26-035ರಡಿ ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಕಡತದಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ತಾಲ್ಲೂಕು ಪಂಚಾಯಿತಿ ಕಾರ್ಯಕ್ರಮದಡಿ ರೂ4.12ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 257 ವೆಚ್ಚ 6/2021(ಇ) ದಿನಾಂಕ: 4ನೇ ಜನವರಿ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯಿತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ. 4.12ಲಕ್ಷ (ರೂಪಾಯಿ ನಾಲ್ಕು ಲಕ್ಷದ ಹನ್ನೆರಡು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಕಾರ್ಯನಿರ್ವಾಹಕ ಅಧಿಕಾರಿ/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. **ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.**

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಶಿವಮೊಗ್ಗ | 2059-00-101-0-26-035 | 4.12 |
| | ಒಟ್ಟು | 1417778666 | **4.12** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

06/01/22

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)

ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ

ಆರ್ಥಿಕ ಇಲಾಖೆ

ಇವರಿಗೆ:

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
4. ಆಯುಕ್ತರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್. ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು

5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಶಿವಮೊಗ್ಗ
6. ಅಪರ ನಿರ್ದೇಶಕರು, ಖಜಾನೆ–2, ಕೆ.ಪಿ.ಸಿ.ಎಲ್. ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು
7. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು ಪೂರ್ವ
8. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತಕ್ಕೆ
9. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ